ಇಲಾಖೆಯಿಂದ ಒದಗಿಸಲಾದ ಅನುದಾನ

12(42) ಶ್ರೀ ಗೋಪಾಲ ಭಂಡಾರಿ ಹೆಚ್:(ಕಾರ್ಕಳ) ಮಾನ್ಯ ಜಲಸಂಪನ್ಮೂಲ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದ ಯಾವ ಯಾವ ತಾಲ್ಲೂಕಿನಲ್ಲಿ ಎಷ್ಟು ಮೊತ್ತದ ಕಾಮಗಾರಿಗಳನ್ನು 2009–10ನೇ ಆರ್ಥಿಕ ವರ್ಷದಲ್ಲಿ ಕೈಗೊಳ್ಳಲಾಗಿದೆ?

ಆ) ಪ್ರಸಕ್ತ ವರ್ಷದಲ್ಲಿ ಭಾರಿ ನೀರಾವರಿ ಮತ್ತು ಸಣ್ಣ ನೀರಾವರಿ ಇಲಾಖೆಯಿಂದ ಪ್ರತಿ ತಾಲ್ಲೂಕಿಗೆ ಎಷ್ಟೆಷ್ಟು ಅನುದಾನವನ್ನು ಯಾವ ಯಾವ ಕಾಮಗಾರಿಗಳಿಗೆ ಒದಗಿಸಲಾಗಿದೆ (ತಾಲ್ಲೂಕುವಾರು ವಿವರ ಒದಗಿಸುವುದು)

ಇ) ನಿಗದಿಪಡಿಸಿರುವ ಅನುದಾನದಲ್ಲಿ ಬಿಡುಗಡೆಯಾಗದ ಹಣವೆಷ್ಟು (ತಾಲ್ಲೂಕುವಾರು ಅನುದಾನದ ವಿವರ ಒದಗಿಸುವುದು)

ಶ್ರೀ ಬಸವರಾಜ ಬೊಮ್ಮಾಯಿ(ಜಲಸಂಪನ್ಮೂಲ ಸಚಿವರು):

ಅ) ಜಲ ಸಂಪನ್ಮೂಲ ಆಯವ್ಯಯದಲ್ಲಿ ಯೋಜನಾವಾರು ಅನುದಾನ ಹಂಚಿಕೆ ಮಾಡಲಾಗಿದೆ. ತಾಲ್ಲೂಕುವಾರು ಅನುದಾನ ನೀಡಲಾಗುತ್ತಿಲ್ಲ.

ಆ) 2010–11 ನೇ ಸಾಲಿನ ಆಯವ್ಯಯದಲ್ಲಿ ಸಣ್ಣ ನೀರಾವರಿ ಇಲಾಖೆಗೆ–ಯೋಜನೆ ಅಡಿ ರೂ.806.87 ಕೋಟಿಗಳು ಮತ್ತು ಯೋಜನೇತರ ಅಡಿ ರೂ.54.71 ಕೋಟಿಗಳು, ಒಟ್ಟು 861.58 ಕೋಟಿಗಳ ಅನುದಾನ ಒದಗಿಸಲಾಗಿದೆ. ಪ್ರಸ್ತುತ ಈ ಅನುದಾನವನ್ನು ತಾಲ್ಲೂಕುವಾರು, ಕಾಮಗಾರಿವಾರು ಹಂಚಿಕೆ ಮಾಡಿರುವುದಿಲ್ಲ.

ಇ) ಮೇಲಿನ ಉತ್ತರದ ಹಿನ್ನಲೆಯಲ್ಲಿ ಈ ಪ್ರಶ್ನೆ ಉದ್ಭವಿಸುವುದಿಲ್ಲ.

'ಬಿ' ಸ್ಕೀಂ ನಡಿ ಹಂಚಿಕೆಯಾಗಿರುವ ನೀರಿನ ಪ್ರಮಾಣ

14(01) ಶ್ರೀ ಕರಡಿ ಸಂಗಣ್ಣ ಅಮರಪ್ಪ:(ಕೊಪ್ಪಳ) ಮಾನ್ಯ ಜಲಸಂಪನ್ಮೂಲ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?